**<u>ಪ್ರಧಾನ  ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ರವರ ನ್ಯಾಯಾಲಯ, ಚಳ್ಳಕೆರೆ.</u>**

**<u>ಸಿ.ಸಿ. ನಂ. 1788/2024</u>**

ಪ್ರಮಾಣ ವಚನ ಬೋಧಿಸಲಾಯಿತು.

| | | | |
|---|---|---|---|
| ಹೆಸರು | : | ಸೈಯ್ಯದ್ ಸಮಿವುಲ್ಲಾ | ಸಿ.ಡಬ್ಲ್ಯೂ–04 |
| ತಂದೆ ಹೆಸರು | : | ಬಾಷಸಾಬ್ | ಪಿ.ಡಬ್ಲ್ಯೂ–03 |
| ವಯಸ್ಸು | : | 52 ವರ್ಷ | |
| ಉದ್ಯೋಗ | : | ವ್ಯಾಪಾರ | |
| ವಾಸಸ್ಥಳ | : | ಇಮಾಂಪುರ ಗ್ರಾಮ | ದಿಃ 19–02–2026. |

**<u>ಮುಖ್ಯ ವಿಚಾರಣೆ: ಮಾನ್ಯ ಎ.ಪಿ.ಪಿ. ರವರಿಂದಃ</u>**

ಈ ಪ್ರಕರಣದ ಬಗ್ಗೆ ನನಗೆ ಮಾಹಿತಿ ಇಲ್ಲ.  ನಾನು ಯಾವುದೇ ಘಟನೆಯನ್ನು ನೋಡಿರುವುದಿಲ್ಲ.  ನ್ಯಾಯಾಲಯದ ಮುಂದೆ ಇರುವ ಆರೋಪಿತರುಗಳು ನನಗೆ ಗೊತ್ತು.

**( ಈ ಹಂತದಲ್ಲಿ ಸಹಾಯಕ ಸರ್ಕಾರಿ ಅಭಿಯೋಜಕರು ಸದರಿ ಸಾಕ್ಷಿಯನ್ನು  ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗಾಗಿ ಅನುಮತಿ ಕೋರಿರುತ್ತಾರೆ, ಸಾಕ್ಷಿಯ ಹೇಳಿಕೆ ಹಾಗೂ  ದಾಖಲೆಗಳನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು)**

**<u>ಪಾಟೀ ಸವಾಲು ಮಾನ್ಯ ಎ.ಪಿ.ಪಿ. ರವರಿಂದಃ</u>**

ದಿನಾಂಕ 10.10.2023 ರಂದು ಮಧ್ಯಾಹ್ನ 12.30 ರ ಸಮಯದಲ್ಲಿ ನಾನು ನಮ್ಮ ಮನೆಯ ಬಳಿ ಇದ್ದಾಗ ನಮ್ಮ ಊರಿನ  ಗೇಟಿನಲ್ಲಿ ಕೇಸರಿ ಬಿಳಿ ಹಸಿರು ಬಣ್ಣದ  ಭಾರತದ ಬಾವುಟಕ್ಕೆ ಹೋಲಿಕೆಯಾಗುವಂತಹ ಬಾವುಟದ ಮೇಲೆ ಮುಸ್ಲಿಂ ಭಾಂದವರ ಪುಣ್ಯ ಕ್ಷೇತ್ರವಾದ ಮಕ್ಕಾ ಮದೀನ ಚಿತ್ರಗಳು ಹಾಗೂ ಧರ್ಮ ಸಂದೇಶವನ್ನು ಮುದ್ರಿಸಿರುವ ಬಾವುಟವನ್ನು ಯಾರೋ ಹಾರಿಸಿರುತ್ತಾರೆ ಎಂಬ ವಿಚಾರ ತಿಳಿದಿರುತ್ತದೆ ಎಂದರೆ ಸರಿಯಲ್ಲ.  ಆಗ ನಾನು ಮತ್ತು ಚಾಸಾ–3 ರವರು ಕೂಡಲೇ ಗೇಟಿನ ಬಳಿ ಬಂದು  ನೋಡಲಾಗಿ ವಿಚಾರ ನಿಜ ಎಂದುದ  ಕಂಡು ಬಂದಿರುತ್ತದೆ ಎಂದರೆ ಸರಿಯಲ್ಲ.  ಯಾರೋ ಅಸಾಮಿಗಳು ಕೋಮ ಸೌಹಾರ್ದತೆಗೆ ಧಕ್ಕೆ ತರುವ ಸಲುವಾಗಿ ಈ ರೀತಿ ಮಾಡಿರುತ್ತದೆ ಎಂದು ಗೊತ್ತಾಗಿರುತ್ತದೆ ಎಂದರೆ ಸರಿಯಲ್ಲ.  ನಂತರ ಗ್ರಾಮದಲ್ಲಿ ವಿಚಾರ ಮಾಡಿದಾಗ ದಿನಾಂಕ 09.10.2023 ರಂದು ರಾತ್ರಿ 09–00 ಗಂಟೆ ಸಮಯದಲ್ಲಿ ಸದರಿ ಬಾವುಟವನ್ನು ಕಟ್ಟಿರುತ್ತಾರೆ ಎಂದು ತಿಳಿದಿರುತ್ತದೆ ಎಂದರೆ ಸರಿಯಲ್ಲ.

ದಿನಾಂಕಃ 23.10.2023 ರಂದು ಪೊಲೀಸರ ಮುಂದೆ ಈಗ ಓದಿ ಹೇಳಿದಂತೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಅಲ್ಲಗಳೆದ ಹೇಳಿಕೆಯನ್ನು ನಿಪಿ.5 ಎಂದು ಗುರುತಿಸಲಾಯಿತು.

ಎಲ್ಲಾ ವಿಚಾರ ಗೊತ್ತಿದ್ದರೂ ಸಹಾ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಶ್ರೀ ಜೆ.ಡಿ., ಆರೋಪಿ ಪರ ವಕೀಲರಿಂದಃ**

ಆರೋಪಿಯ ಪರ ವಕೀಲರು ಪಾಟೀ ಸವಾಲು ಇರುವುದಿಲ್ಲ ಎಂದು ನುಡಿದ ಕಾರಣ ಸದರಿ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ.ಹೇ.ಕೇ.ಸರಿಯಿದೆ,

ಪ್ರಧಾನ ಸಿವಿಲ್ ಮತ್ತು ಜೆ.ಎಂ.ಎಫ್.ಸಿ.,
ನ್ಯಾಯಾಧೀಶರು, ಚಳ್ಳಕೆರೆ